# ದಿನಾಂಕ: 30-12-2011ರಂದು ಬೆಳಿಗ್ಗೆ:11-00 ಗಂಟೆಗೆ ಹೊಯ್ಸಳ ಸಭಾಂಗಣ, ಜಿಲ್ಲಾ ಪಂಚಾಯಿತಿ, ಹಾಸನ ಇಲ್ಲಿ ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳು

ಅಧ್ಯಕ್ಷತೆ: ಶ್ರೀ ಎಂ.ಕೆ.ದೇವಪ್ಪ ಮಲ್ಲಿಗೆವಾಳು

ಅಧ್ಯಕ್ಷರು

ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ

ಹಾಜರಿ :05

ಗೈರು ಹಾಜರಿ:02

| ಕ್ರಸಂ | ವಿಷಯ | ಚರ್ಚೆ | ತೀರ್ಮಾನ |
|---|---|---|---|
| | | ಉಪ ಕಾರ್ಯದರ್ಶಿ(ಆಡಳಿತ) ರವರು ಸಭೆಗೆ ಹಾಜರಿದ್ದ ಮಾನ್ಯ ಸಮಿತಿ ಅಧ್ಯಕ್ಷರು, ಸದಸ್ಯರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಅಧ್ಯಕ್ಷತೆಯನ್ನು ವಹಿಸಿ ಸಭೆಯನ್ನು ನಡೆಸಿಕೊಡಬೇಕೆಂದು ಅಧ್ಯಕ್ಷರನ್ನು ಕೋರಿದರು. | |
| | | **<u>ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ:</u>**<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆರವರು ಮಾತನಾಡುತ್ತಾ, ಕಟ್ಟಡಗಳು ಯೋಜನೆಯಡಿ ರೂ.25.00ಲಕ್ಷಗಳು ದುರಸ್ಥಿಗಾಗಿ ನಿಗದಿಯಾಗಿರುತ್ತವೆ. ದುರಸ್ಥಿ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ವತಿಯಿಂದ ಅನುಷ್ಠಾನ ಮಾಡಲಾಗುತ್ತದೆ. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ವತಿಯಿಂದ ಕಾಮಗಾರಿಗಳು ಯಾವ ಹಂತದಲ್ಲಿವೆ ಮತ್ತು ಎಷ್ಟು ಅನುದಾನ ಖರ್ಚಾಗಿದೆ ಎಂಬ ಬಗ್ಗೆ ಮಾಹಿತಿಯನ್ನು ನೀಡುವುದಿಲ್ಲ ಮತ್ತು ಕಾಮಗಾರಿಗಳನ್ನು ಅನುಷ್ಠಾನ ಮಾಡದೇ ಅನುದಾನವನ್ನು ವ್ಯಪಗತ ಮಾಡಿ, ಕಾಮಗಾರಿಗಳನ್ನು ಮುಂದಿನ ವರ್ಷಕ್ಕೆ ಮುಂದುವರೆದ ಕಾಮಗಾರಿಯನ್ನಾಗಿ ಸೇರಿಸುತ್ತಾರೆ. ಇಲಾಖೆಯ ವತಿಯಿಂದ ಅತ್ಯಲ್ಪ ಪ್ರಮಾಣದಲ್ಲಿ ದುರಸ್ಥಿಗೆ ಅನುದಾನವನ್ನು ನಿಗದಿಪಡಿಸುತ್ತಾರೆ. ಆದರೆ, ಇಲಾಖಾ ಕಟ್ಟಡಗಳಿಗೆ ವಾಸ್ತವವಾಗಿ ಆಗಬೇಕಾಗಿರುವ ಕಾಮಗಾರಿಗಳನ್ನು ಅನುಷ್ಠಾನ ಮಾಡದೇ ಕೇವಲ ಸುಣ್ಣ ಬಣ್ಣ ಬಳಿಯುವ ಕಾಮಗಾರಿಯನ್ನು ಮಾಡುತ್ತಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳಿಂದ ಕಾಮಗಾರಿಗಳು ಮತ್ತು ವೆಚ್ಚದ ಬಗ್ಗೆ ಮಾಹಿತಿಯನ್ನು ಪಡೆದು ಜನವರಿ 2012ರ ಮಾಹೆಯಿಂದ ಜಿಲ್ಲಾ ಪಂಚಾಯಿತಿಯಿಂದಲೇ ಮಾಹಿತಿಯನ್ನು ನೀಡಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.<br>ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಇವರು ಮಾತನಾಡುತ್ತಾ, ಹಾಸನ ವಿಭಾಗಕ್ಕೆ ಸಂಬಂಧಿಸಿದಂತೆ, ಎಲ್ಲಾ ಇಲಾಖೆಗಳ ಕಾಮಗಾರಿಗಳಿಗೆ ಸಂಬಂಧಪಟ್ಟ ತಾಲ್ಲೂಕು ಮಟ್ಟದ ಅಧಿಕಾರಿ/ ಮೇಲ್ವಿಚಾರಕರಿಂದ ಕಾಮಗಾರಿಗಳ ಅನುಷ್ಠಾನದ ಬಗ್ಗೆ ದೃಡೀಕರಣವನ್ನು ಪಡೆದುಕೊಂಡ ನಂತರವಷ್ಟೇ ಕಾಮಗಾರಿ ಬಿಲ್ಲನ್ನು ಪಾವತಿಸಲಾಗುತ್ತಿದೆ ಎಂದು ಸಭೆಗೆ ವಿವರ ನೀಡಿದರು. ಜಿಲ್ಲಾ ಮಟ್ಟದ ಅಧಿಕಾರಿಯವರಿಂದ ದೃಡೀಕರಣ ಪಡೆದು ನಂತರ ಬಿಲ್ | ಸಭೆಯಲ್ಲಿ ಚರ್ಚಿಸಿದಂತೆ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ಕಟ್ಟಡಗಳು ಯೋಜನೆ ಯಡಿಯಲ್ಲಿ ದುರಸ್ಥಿಪಡಿಸುವ ಕಾಮಗಾರಿ ಗಳಿಗೆ ಸಂಬಂಧಿಸಿದಂತೆ, ಜಿಲ್ಲಾ ಅಧಿಕಾರಿಯವರಿಂದ ದೃಡೀಕರಣ ಪಡೆದ ನಂತರವೇ ಬಿಲ್ಲನ್ನು ಪಾವತಿಸುವಂತೆ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ ಮತ್ತು ಚನ್ನರಾಯಪಟ್ಟಣ ಇವರಿಗೆ ತಿಳಿಸಲಾಯಿತು.<br>ಹಾಸನ ನಗರದಲ್ಲಿ 320 ಹೆಚ್ಚುವರಿ ಸಂಖ್ಯಾಬಲದ ಬಾಲಕ/ ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಅಡುಗೆ ಸಿಬ್ಬಂದಿ ಯವರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಸಭೆಯಲ್ಲಿ ಸರ್ವಾನುಮತದಿಂದ ನಿರ್ಣಯಿಸಲಾಯಿತು. |

| | | | |
|---|---|---|---|
| | | ಪಾವತಿಸಲು ನಿರ್ಣಯವನ್ನು ಮಾಡಿದಲ್ಲಿ ಅದರಂತೆಯೇ ಕ್ರಮ ವಹಿಸಲಾಗುವುದು ಎಂದು ಸಭೆಗೆ ತಿಳಿಸಿದರು.<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಪ್ರತಿ ವಿದ್ಯಾರ್ಥಿನಿಲಯಗಳಲ್ಲಿ ಜಿಲ್ಲಾ ಪಂಚಾಯತ್ ಅಧ್ಯಕ್ಷರು/ಉಪಾಧ್ಯಕ್ಷರು ಮತ್ತು ಸ್ಥಾಯಿ ಸಮಿತಿ ಅಧ್ಯಕ್ಷರ ವಿವರಗಳನ್ನು ಪ್ರಕಟಿಸಲು ಕ್ರಮ ವಹಿಸುವಂತೆ ತಿಳಿಸಿದರು.<br>ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆರವರು ಮಾತನಾಡುತ್ತಾ, ಹಾಸನ ನಗರದಲ್ಲಿ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಹೆಚ್ಚುವರಿಯಾಗಿ 320 ವಿದ್ಯಾರ್ಥಿಗಳಿಗೆ ಮಂಜೂರಾತಿಯನ್ನು ನೀಡಿದ್ದು, ಹೆಚ್ಚುವರಿ ವಿದ್ಯಾರ್ಥಿಗಳಿಗೆ ಬಾಡಿಗೆ ಕಟ್ಟಡವನ್ನು ಪಡೆದು ವಿದ್ಯಾರ್ಥಿನಿಲಯವನ್ನು ನಡೆಸಲು ಸೂಚಿಸಿದ್ದು, ಬೇರೆ ವಿದ್ಯಾರ್ಥಿನಿಲಯದ ಮೇಲ್ವಿಚಾರಕರಿಗೆ ಪ್ರಭಾರವನ್ನು ವಹಿಸಲಾಗಿದೆ. ಆದರೆ, ಅಡುಗೆಯವರಿಗೆ ವೇತನವನ್ನು ನೀಡಲು ತೊಂದರೆಯಾಗಿರುತ್ತದೆ. ಆದ್ದರಿಂದ, ಅವಶ್ಯ ಅಡುಗೆ ಸಿಬ್ಬಂದಿಯವರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಅನುಮತಿ ನೀಡಬೇಕೆಂದು ಕೋರಿದರು.<br>**<u>ಸಮಾಜ ಕಲ್ಯಾಣ ಇಲಾಖೆ:</u>**<br>ಮಾನ್ಯ ಅಧ್ಯಕ್ಷರು ಮಾತನಾಡುತ್ತಾ, ಹೊರಗುತ್ತಿಗೆ ಸಿಬ್ಬಂದಿಯವರಿಗೆ ವೇತನವನ್ನು ನೀಡಲು ವಿಳಂಬ ಮಾಡಲಾಗುತ್ತಿದೆಯೆಂದು ಆರೋಪ ಇದ್ದು, ಈ ಬಗ್ಗೆ ಗಮನ ಹರಿಸಬೇಕೆಂದು ತಿಳಿಸಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ಹೊರಗುತ್ತಿಗೆ ಸಿಬ್ಬಂದಿಯವರ ಗುತ್ತಿಗೆ ಪಡೆಯುವ ಸಂಸ್ಥೆಯವರಿಗೆ ಚೆಕ್ ನೀಡುವುದು ತಡವಾದರೂ ಸಹ ಮುಂಚಿತವಾಗಿಯೇ ಸಿಬ್ಬಂದಿಯವರಿಗೆ ವೇತನ ಪಾವತಿಸುವ ಷರತ್ತನ್ನು ವಿಧಿಸಲಾಗಿದೆ. ಆದ್ದರಿಂದ, ಈ ಬಗ್ಗೆ ಸಂಬಂಧಪಟ್ಟ ಸಂಸ್ಥೆಯವರಿಗೆ ನಿರ್ದೇಶನ ನೀಡಬೇಕೆಂದು ತಿಳಿಸಿದರು.<br>ಮಾನ್ಯ ಸದಸ್ಯರಾದ ಶ್ರೀಮತಿ ಪಾರ್ವತಮ್ಮರವರು ಮಾತನಾಡುತ್ತಾ, ಕಲ್ಲುಸಾದರಹಳ್ಳಿ ವಿದ್ಯಾರ್ಥಿನಿಲಯದಲ್ಲಿರುವ ಮಕ್ಕಳಿಗೆ ಹಾಸಿಗೆ ಹೊದಿಕೆ ನೀಡಿಲ್ಲದಿರುವುದರಿಂದ, ಮಕ್ಕಳಿಗೆ ತುಂಬಾ ತೊಂದರೆಯಾಗಿದ್ದು, ಮಕ್ಕಳು ತಮ್ಮ ತಮ್ಮ ಮನೆಗಳಿಗೆ ಹೋಗುತ್ತಿದ್ದಾರೆ. ಆದ್ದರಿಂದ, ಈ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮ ವಹಿಸಬೇಕೆಂದು ಕೋರಿದರು.<br>ಮುಂದುವರೆದು, ಪರಿಶಿಷ್ಟ ವರ್ಗದ ಕಾಲೇಜು ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ವಿದ್ಯಾರ್ಥಿವೇತನ ಸಿಕ್ಕಿರುವುದಿಲ್ಲ. ಈ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಬೇಕೆಂದು ಕೋರಿದರು. | ಸಭೆಯಲ್ಲಿ ಚರ್ಚಿಸಿದಂತೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಂಗನವಾಡಿ ಕೇಂದ್ರಗಳ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ, ವಿಶೇಷ ಅಭಿವೃದ್ಧಿ ಯೋಜನೆ ಮತ್ತು ಆರ್.ಐ.ಡಿ.ಎಫ್ ಯೋಜನೆಯಡಿ ಮಂಜೂರಾಗಿರುವ ಅಂಗನವಾಡಿ ಕೇಂದ್ರಗಳ ಕಟ್ಟಡಗಳನ್ನು ಕರ್ನಾಟಕ ಮೂಲ ಸೌಕರ್ಯಗಳ ಅಭಿವೃದ್ಧಿ ನಿಗಮದಲ್ಲಿರುವ ಅನುದಾನವನ್ನು ವಾಪಸ್ಸು ಪಡೆದು 13ನೇ ಹಣಕಾಸು ಕಟ್ಟಡಗಳು ಯೋಜನೆಯಡಿ ಬಿಡುಗಡೆಯಾಗುವ ಅನುದಾನದಲ್ಲಿ ಅವಶ್ಯ ಅನುದಾನವನ್ನು ವಿನಿಯೋಗಿಸಿಕೊಂಡು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ವತಿಯಿಂದ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. |

| | | | |
|---|---|---|---|
| | | **ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ:**<br>ಸಹಾಯಕ ನಿರ್ದೇಶಕರು ಮಾತನಾಡುತ್ತಾ, 2011-12ನೇ ಸಾಲಿಗೆ ವಿವಿಧ ಯೋಜನೆಗಳಿಗೆ ನಿಗದಿಪಡಿಸಿರುವ ಅನುದಾನ ಮತ್ತು ವಿನಿಯೋಗಿಸುವ ಅನುದಾನದ ಬಗ್ಗೆ ವಿವರಗಳನ್ನು ಸಭೆಗೆ ನೀಡಿದರು.<br>ಮಾನ್ಯ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳು ಅಂಗನವಾಡಿ ಕೇಂದ್ರಗಳ ಕಟ್ಟಡ ನಿರ್ಮಾಣದ ಬಗ್ಗೆ ಕ್ರಮ ವಹಿಸಬೇಕೆಂದು ತಿಳಿಸಿದರು.<br>ಉಪ ಕಾರ್ಯದರ್ಶಿ(ಆಡಳಿತ)ರವರು ಮಾತನಾಡುತ್ತಾ, ವಿಶೇಷ ಅಭಿವೃದ್ಧಿ ಯೋಜನೆ ಮತ್ತು ಆರ್.ಐ.ಡಿ.ಎಫ್ ಯೋಜನೆಯಡಿ ಅಂಗನವಾಡಿ ಕೇಂದ್ರಗಳಿಗೆ ಹೊಸ ಕಟ್ಟಡಗಳು ಮಂಜೂರಾಗಿದ್ದು, ಘಟಕ ವೆಚ್ಚ ರೂ.3.68ಲಕ್ಷ ಇರುತ್ತದೆ. ಅನುದಾನವನ್ನು ಕರ್ನಾಟಕ ಮೂಲ ಸೌಕರ್ಯಗಳ ನಿಗಮಕ್ಕೆ ಬಿಡುಗಡೆ ಮಾಡಿದ್ದು, ಸದರಿಯವರು ಘಟಕ ವೆಚ್ಚ ಕಡಿಮೆಯಾಗಿರುತ್ತದೆ ಎಂದು ಕಟ್ಟಡ ಕಾಮಗಾರಿಗಳನ್ನು ಅನುಷ್ಠಾನ ಮಾಡಿರುವುದಿಲ್ಲ. ಅನುದಾನ ಹಾಗೆಯೇ ಬಾಕಿ ಉಳಿದಿದ್ದು, 13ನೇ ಹಣಕಾಸು ಕಟ್ಟಡಗಳು ಯೋಜನೆಯಡಿ ಬಿಡುಗಡೆಯಾಗುವ ಅನುದಾದಲ್ಲಿ ಘಟಕ ವೆಚ್ಚದ ಜೊತೆಗೆ ಅವಶ್ಯ ಅನುದಾನವನ್ನು ಬಳಸಿಕೊಂಡು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ವತಿಯಿಂದಲೇ ಅನುಷ್ಠಾನ ಮಾಡಬಹುದಾಗಿರುತ್ತದೆ ಎಂದು ಅಭಿಪ್ರಾಯಪಟ್ಟರು. | |
| | | ಮತ್ಯಾವುದೇ ವಿಷಯಗಳು ಚರ್ಚೆಗೆ ಬಾರದ ಹಿನ್ನೆಲೆಯಲ್ಲಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು. | |

(ಎಂ.ಕೆ.ದೇವಪ್ಪ ಮಲ್ಲಿಗೆವಾಳು)
ಅಧ್ಯಕ್ಷರು
ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ
ಜಿಲ್ಲಾ ಪಂಚಾಯಿತಿ, ಹಾಸನ